**OS NO. 75/2022**
**PW-1**
(Sharanaiah)

**<u>ಸಾಕ್ಷಿಯನ್ನು ಇಂದು ದಿನಾಂಕ 10.01.2023 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಶ್ರೀ ಪಿ. ಕೆ. ವಾದಿ ಪರ ವಕೀಲರಿಂದ</u>**

ನಾನು ನನ್ನ ಮುಖ್ಯ ವಿಚಾರಣೆ ಸಾಕ್ಷಿಯ ಪ್ರಮಾಣ ಪತ್ರ ಸಲ್ಲಿಸಿದ್ದು, ಅದರಲ್ಲಿ ಹೇಳಿ ಬರೆಯಿಸಿರುವ ಎಲ್ಲ ಸಂಗತಿಗಳು ಸತ್ಯವಾಗಿದ್ದು, ಸದರಿ ಸಂಗತಿಗಳನ್ನು ನನ್ನ ಸೂಚನೆಯ ಮೇರೆಗೆ ಬರೆದಿರುತ್ತಾರೆ.

ಸರ್ವೇ ನಂ.6ರ ಕೈ ಬರಹ ಪಹಣಿಯನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-1 ಎಂದು, ಸರ್ವೇ ನಂ.6/ಆ ಇದರ 4 ಕೈ ಬರಹ ಪಹಣಿಗಳನ್ನು ಹಾಜರುಪಡಿಸಿರುತ್ತೇನೆ ಅವುಗಳನ್ನು ನಿಪಿ-2 ರಿಂದ 5 ಎಂದು, ಸರ್ವೇ ನಂ.6ರ 2022-23ರ ಪಹಣಿ ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-6 ಎಂದು, ದಾವಾ ವಸ್ತುಸ್ಥಿತಿ ತೋರಿಸುವ 6 ಪೋಟೋಗಳನ್ನು ಹಾಜರುಪಡಿಸಿರುತ್ತೇನೆ ಅವುಗಳನ್ನು ನಿಪಿ-7 ರಿಂದ 12 ಎಂದು, ಪೋಟೋಗಳನ್ನು ಶೇಖರಿಸಲಾದ ಸಿ.ಡಿ.ಯನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-13 ಎಂದು ಗುರುತಿಸಲಾಯಿತು.

ಆದ್ದರಿಂದ ನಾನು ಕೋರಲಾದಂತೆ ದಾವೆಯನ್ನು ಖರ್ಚು ಸಹಿತ ಡಿಕ್ರಿ ಮಾಡಲು ಪ್ರಾರ್ಥಿಸುತ್ತೇನೆ.

**(ಪ್ರತಿವಾದಿಯರು ಗೈರು ಹಾಜರಿದ್ದು, ಪಾಟೀ ಸವಾಲಿಗೆ ಅಂತಿಮ ಮುದ್ದತ್ತು ನೀಡಲಾಯಿತು.)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ. ಹೇ. ಕೇ. ಸರಿ ಇದೆ.

ಸಹಿ/-

ಸಿವಿಲ್ ನ್ಯಾಯಾಧೀಶರು

ಸೇಡಂ.

*SYH*